26. 2006ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 875.50 ಲಕ್ಷ ರೂ. ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

27. 2006ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಕಾನೂನು'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 1712.60 ಲಕ್ಷ ರೂ. ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

28. 2006ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 40.00 ಲಕ್ಷ ರೂ. ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

2. ಶಾಸನ ರಚನೆ

(ಅ) ವಿಧೇಯಕಗಳ ಮಂಡನೆ

(i) ಕರ್ನಾಟಕ ಧನ ವಿನಿಯೋಗ ಸಂಖ್ಯೆ(3) ವಿಧೇಯಕ, 2005. ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) : ಮಾನ್ಯ ಸಭಾಧ್ಯಕ್ಷರೆ, "2005ನೇ ಸಾಲಿನ ಕರ್ನಾಟಕ ಧನ ವಿನಿಯೋಗ ಸಂಖ್ಯೆ, (3) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ".

ಅಧ್ಯಕ್ಷರು : ಪ್ರಸ್ತಾವ ಏನೆಂದರೆ :–

"2005ರ ಕರ್ನಾಟಕ ಧನ ವಿನಿಯೋಗ ಸಂಖ್ಯೆ (3) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, "2005ನೇ ಸಾಲಿನ ಕರ್ನಾಟಕ ಧನ ವಿನಿಯೋಗ ಸಂಖ್ಯೆ (3) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. **(ಅನುಬಂಧ – I)**

(ii) 2005ನೇ ಸಾಲಿನ ಕರ್ನಾಟಕ ಮನೋರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, "2005ನೇ ಸಾಲಿನ ಕರ್ನಾಟಕ ಮನೋರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ :

"2005ರ ಕರ್ನಾಟಕ ಮನೋರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, "2005ನೇ ಸಾಲಿನ ಕರ್ನಾಟಕ ಮನೋರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. **(ಅನುಬಂಧ – II)**

(iii) 2005ನೇ ಸಾಲಿನ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (2ನೇ ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, "2005ನೇ ಸಾಲಿನ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (2ನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ:

"2005ನೇ ಸಾಲಿನ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (2ನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, "2005ನೇ ಸಾಲಿನ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (2ನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲಾಯಿತು."

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. **(ಅನುಬಂಧ – III)**

ಆ. ವಿಧೇಯಕಗಳ ಪರ್ಯಾಲೋಚನೆ ಮತ್ತು ಅಂಗೀಕಾರ

(i) ಕರ್ನಾಟಕ ಧನ ವಿನಿಯೋಗ (ಸಂಖ್ಯೆ–3) ವಿಧೇಯಕ, 2005

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2005ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ **"2005ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ–3) ವಿಧೇಯಕವನ್ನು ಪರ್ಯಾಲೋಚಿಸುವುದು".**

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಅಧ್ಯಕ್ಷರು : ಪ್ರಸ್ತಾವ ಏನೆಂದರೆ : "ಖಂಡ 2 ಮತ್ತು 3, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3, ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು